(04)

<u>**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಛಲವಾದಿ ಟಿ . ನಾರಾಯಣಸ್ವಾಮಿ , ಇವರು ನೀಡಿರುವ ಶೂನ್ಯ ವೇಳೆ ಪ್ರಶ್ನೆಯ ಮೇಲಿನ ಹೇಳಿಕೆ.**</u>

**ವಿಷಯ:** **ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಜನರಿಗೆ ಶುದ್ಧವಾದ ಕುಡಿಯುವ ನೀರು ಪೂರೈಕೆಯಾಗದೇ ಕಲುಷಿತ ನೀರು ಸೇವನೆಯಿದ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದು, ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಎಚ್ಚರಿಕೆ ನೀಡುವ ಕುರಿತು.**

****

**ಹೇಳಿಕೆ:** ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕು ರೇಕಲಮರಡಿ ಗ್ರಾಮದಲ್ಲಿ ದಿನಾಂಕ:25.05.2023ರಂದು ವಾಂತಿ ಬೇಧಿ ಪ್ರಕರಣವು ಕಂಡು ಬಂದಿದ್ದು, ಒಟ್ಟು 16 ಮಕ್ಕಳನ್ನು ಒಳಗೊಂಡಂತೆ 37 ಜನರನ್ನು ಒಳರೋಗಿಗಳನ್ನಾಗಿ ರೋಗಿಗಳ ಸ್ಥಿತಿಗನುಸಾರವಾಗಿ ಅರಕೇರ ಸಮುದಾಯ ಆರೋಗ್ಯ ಕೇಂದ್ರ, ದೇವದುರ್ಗ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಮತ್ತು ರಾಯಚೂರಿನ RIMS ಆಸ್ಪತ್ರೆಯಲ್ಲಿ ದಾಖಲಿಸಿಕೊಂಡು ಅಗತ್ಯ ಚಿಕಿತ್ಸೆ ಬಳಿಕ ಗುಣಮುಖರಾಗಿ ಬಿಡುಗಡೆಗೊಳಿಸಲಾಗಿರುತ್ತದೆ.

ಸದರಿ ಗ್ರಾಮದಲ್ಲಿ KRIDL ನಿಂದ ರಸ್ತೆ ಕಾಮಗಾರಿಯನ್ನು ಕೈಗೊಳ್ಳುತ್ತಿದ್ದು, ನೀರು ಸರಬರಾಜು ಮಾಡುವ ಪೈಪ್ ಲೈನ್ ಗಳು ಒಡೆದು ಹೋಗಿದ್ದು, ರಸ್ತೆ ಕಾಮಗಾರಿಯಿಂದ ಚರಂಡಿ ನೀರು ಅಲ್ಲಿಯೇ ಸ್ಥಗಿತಗೊಂಡಿರುತ್ತದೆ. ಹಾಗೂ ಒಡೆದುಹೋಗಿರುವ ಪೈಪ್ ಲೈನ್ ಅನ್ನು ಸರಿಪಡಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಳ್ಳವನ್ನು ತೆಗೆಸಿದ್ದು, ಪೈಪ್ ಲೈನ್ ಅನ್ನು ಸರಿಯಾಗಿ ಸರಿಪಡಿಸಿ ಹಳ್ಳವನ್ನು ಮುಚ್ಚದೇ ಹಾಗೆಯೇ ಬಿಟ್ಟಿದ್ದರಿಂದ ಪಕ್ಕದಲ್ಲಿದ್ದ ಚರಂಡಿ ನೀರು ಪೈಪ್ ಲೈನ್ ನಲ್ಲಿ ಸೇರಿ ಸರಬರಾಜು ಮಾಡುವ ನೀರಿನಲ್ಲಿ Bacteriological contamination ಆಗಿದ್ದರಿಂದ ಸದರಿ ಗ್ರಾಮದಲ್ಲಿ ವಾಂತಿ ಬೇಧಿ ಪ್ರಕರಣಗಳು ಕಂಡು ಬಂದಿರುತ್ತದೆ.

ಸದರಿ ಗ್ರಾಮಕ್ಕೆ ಕುಡಿಯಲು ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡಲಾಗಿದ್ದು, ಪ್ರಸ್ತುತ ಇಲಾಖೆಯಿಂದ ಹೊಸ ಪೈಪ್ ಲೈನ್ ಅಳವಡಿಸಿ ಮತ್ತು ನೀರಿನ ಶೇಖರಣೆಯ GLSR ಅನ್ನು ಕ್ಲೋರಿನೇಷನ್ ಮಾಡಿಸಲಾಗಿದ್ದು, ಕುಡಿಯುವ ನೀರನ್ನು ಸರಬರಾಜು ಮಾಡಲು ಕ್ರಮ ವಹಿಸಲಾಗಿರುತ್ತದೆ.

ಮುಂದುವರೆದು ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಬಸರಿಹಾಳ್ ಹಾಗೂ ಕುಷ್ಟಗಿ ತಾಲ್ಲೂಕಿನ ಬಿಜಕಲ್ ಗ್ರಾಮದಲ್ಲಿ ವಾಂತಿ ಬೇಧಿ ಪ್ರಕರಣವು ಕಂಡು ಬಂದಿದ್ದು, ಬಿಜಕಲ್ ಗ್ರಾಮದ ಕು|| ನೀಲಾ ತಂದೆ ಈರಪ್ಪ ನೀರಲೂಟಿ ವಯಸ್ಸು 10 ವರ್ಷದ ಮಗು ದಿನಾಂಕ:08.06.2023ರಂದು ಮೃತ ಪಟ್ಟಿರುತ್ತದೆ ಹಾಗೂ ಬಸರಿಹಾಳ್ ಗ್ರಾಮದ ಶ್ರೀಮತಿ ಹೊನ್ನಮ್ಮ ಗಂಡ ಶಿವಪ್ಪ ಎಂಬ 60 ವಯಸ್ಸಿನ ವೃದ್ಧೆಯು ದಿನಾಂಕ:31.05.2023ರಂದು ಮೃತ ಪಟ್ಟಿರುತ್ತಾಳೆಂದು ವರದಿಯಾಗಿದ್ದು,

ಆದರೆ ಸದರಿ ವೃದ್ಧೆಯ ಸಾವು ಕಿಡ್ನಿ ವೈಫಲ್ಯ, ಹೃದಯ ಖಾಯಿಲೆ ಹಾಗೂ ನ್ಯುಮೋನಿಯಾ ಕಾರಣಗಳಿಂದ ಸಂಭವಿಸುತ್ತಿರುತ್ತೆಂದು ಜಿಲ್ಲಾ ಆಸ್ಪತ್ರೆಯ ವೈದ್ಯರು ತಿಳಿಸಿರುತ್ತಾರೆ ಮತ್ತು ದಿನಾಂಕ:06.06.2023ರಂದು ಕು|| ಶ್ರುತಿ ಒಂಭತ್ತು ತಿಂಗಳ ಮಗು ಮರಣ ಹೊಂದಿರುತ್ತದೆ.

ಕನಕಗಿರಿ ತಾಲ್ಲೂಕಿನ ಬಸರಿಹಾಳ್ ಗ್ರಾಮದಲ್ಲಿ OHT ಮತ್ತು ನೀರು ಸರಬರಾಜು ಪೈಪ್ ಲೈನ್ ನಲ್ಲಿ ಸೋರಿಕೆಯಿಂದಾಗಿ ಕುಡಿಯುವ ನೀರು ಕಲುಷಿತವಾಗಿದ್ದು, Bacteriological contamination ಕಂಡು ಬಂದಿರುತ್ತದೆ. ಈ ಘಟನೆ ಸಂಭವಿಸಿದ ದಿನದಿಂದ ಇಲ್ಲಿಯವರೆವಿಗೂ ಟ್ಯಾಂಕರ್ ಮೂಲಕ ನೀರಿನ ವ್ಯವಸ್ಥೆ ಮಾಡಲಾಗುತ್ತಿದ್ದು, Over head tank ಅನ್ನು ಸ್ವಚ್ಛಗೊಳಿಸಿ ಕ್ಲೋರಿನೇಷನ್ ಕೈಗೊಂಡು ನೀರಿನ ಗುಣಮಟ್ಟದ ಪರೀಕ್ಷೆಯನ್ನು NABL Accredited Laboratory ನಲ್ಲಿ ಕೈಗೊಂಡು ನೀರು ಕುಡಿಯಲು ಯೋಗ್ಯವೆಂದು ಖಚಿತಪಡಿಸಿಕೊಂಡ ನಂತರ ಆ ಮೂಲಗಳಿಂದ ಗ್ರಾಮಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದು.

ಬಿಜಿಕಲ್ ಗ್ರಾಮದಲ್ಲಿರುವ ಕೊಳವೆಬಾವಿಗಳಿಂದ ಸರಬರಾಜಾಗುತ್ತಿದ್ದ, ನೀರಿನಲ್ಲಿ Bacteriological contamination ಕಂಡು ಬಂದಿದ್ದು,ಪ್ರಸ್ತುತ 3 ಕೊಳವೆಬಾವಿಗಳನ್ನು ಸ್ಥಗಿತಗೊಳಿಸಲಾಗಿದ್ದು, ಇನ್ನೊಂದು ಕೊಳವೆಬಾವಿಯ ನೀರಿನ ಗುಣಮಟ್ಟದ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಪ್ರಸ್ತುತ ಸದರಿ ಗ್ರಾಮಕ್ಕೆ ಬಳಸುವ ನೀರನ್ನು ಟ್ಯಾಂಕರ್ ಮೂಲಕ ಸರಬರಾಜು ಮಾಡುತ್ತಿದ್ದು, ಕುಡಿಯಲು ಕುಷ್ಟಗಿ ಮತ್ತು ಯಲಬುರ್ಗಾ DBOT ಯಿಂದ OHTಗೆ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ಸದರಿ OHT ನೀರನ್ನು ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಸರಬರಾಜು ಮಾಡಿ, ಸದರಿ ಘಟಕದಿಂದ ಕುಡಿಯುವ ನೀರನ್ನು ಗ್ರಾಮದಲ್ಲಿ ಬಳಸಲಾಗುತ್ತಿದೆ.

ಈ ಮೇಲಿನ ಎಲ್ಲಾ ಪ್ರಕರಣಗಳ ಬಗ್ಗೆ ತನಿಖೆ ನಡೆಸಲು ಸನ್ಮಾನ್ಯ ಮುಖ್ಯಮಂತ್ರಿಗಳು, ದಿನಾಂಕ:12.06.2023ರಂದು ಎಲ್ಲಾ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಆದೇಶಿಸಿದಂತೆ, ಈ ಮೇಲೆ ತಿಳಿಸಿರುವ ಗ್ರಾಮಗಳಲ್ಲಿ ಕಲುಷಿತ ನೀರು ಸೇವಿಸಿ ಸಂಭವಿಸಿರುವ ಅವಘಡಗಳ ಕುರಿತು ತನಿಖೆ ನಡೆಸುವ ಸಲುವಾಗಿ ದಿನಾಂಕ:12.06.2023ರಂದು ಪಂಚಾಯತ್ ರಾಜ್ ಆಯುಕ್ತರಾದ ಶ್ರೀಮತಿ ಪ್ರಿಯಾಂಕ ಮೇರಿ ಫ್ರಾನ್ಸಿಸ್ ರವರ ನೇತೃತ್ವದಲ್ಲಿ ತಂಡವನ್ನು ರಚಿಸಲಾಗಿರುತ್ತದೆ.

ಸದರಿ ತನಿಖಾ ತಂಡವು ದಿನಾಂಕ:14.06.2023ರಂದು ಕೊಪ್ಪಳ ಜಿಲ್ಲೆಯ, ಕನಕಗಿರಿ ತಾಲ್ಲೂಕಿನ ಬಸರಿಹಾಳ್ ಹಾಗೂ ಕುಷ್ಟಗಿ ತಾಲ್ಲೂಕಿನ ಬಿಜಿಕಲ್ ಗ್ರಾಮಕ್ಕೆ ಹಾಗೂ ದಿನಾಂಕ:15.06.2023ರಂದು ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕು ರೇಕಲಮರಡಿ ಗ್ರಾಮಕ್ಕೆ ಭೇಟಿ ನೀಡಿದ್ದು, ತನಿಖೆಯನ್ನು ನಡೆಸಿ, ತನಿಖಾ ಅವಧಿಯಲ್ಲಿ ನಡೆದ ಪರಿಶೀಲನೆಯ ಅಂಶಗಳು, ಗ್ರಾಮ ಪಂಚಾಯತಿಯ ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳಿಂದ ಮಾಹಿತಿಗಳನ್ನು ಸಂಗ್ರಹಿಸಿ ಮತ್ತು ಆಯಾ ಗ್ರಾಮಗಳ ಸಾರ್ವಜನಿಕ ಸ್ವೀಕೃತ ಪ್ರತಿಕ್ರಿಯೆಗಳನ್ನು ಕ್ರೂಢೀಕರಿಸಿದ ತನಿಖಾ ವರದಿಯನ್ನು ದಿನಾಂಕ:20.06.2023ರಂದು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ತನಿಖಾ ತಂಡದ ವರದಿಯಲ್ಲಿ ಈ ಪ್ರಕರಣಗಳ ಸಂಬಂಧ ಕೆಲವು ಅಧಿಕಾರಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಶಿಫಾರಸ್ಸುಗಳನ್ನು ಮಾಡಿದ್ದು, ಈಗಾಗಲೇ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕು ರೇಕಲಮರಡಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಬಸರಿಹಾಳ್ ಹಾಗೂ ಕುಷ್ಟಗಿ ತಾಲ್ಲೂಕಿನ ಬಿಜಕಲ್ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳನ್ನು ಈಗಾಗಲೇ ಅಮಾನತ್ತುಗೊಳಿಸಲಾಗಿದ್ದು, ಉಳಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳುವ ಕುರಿತು ಪರಿಶೀಲನೆಯು ಸರ್ಕಾರದ ಹಂತದಲ್ಲಿರುತ್ತದೆ.

ಇದಲ್ಲದೆ ಕಲುಷಿತ ಕುಡಿಯುವ ಸೇವನೆಯಿಂದ ಗ್ರಾಮೀಣ ಜನವಸತಿ ಪ್ರದೇಶದಲ್ಲಿ ಸಂಭವಿಸುತ್ತಿರುವ ಅವಘಡಗಳು ಪುನರಾವರ್ತನೆಯಾಗದಂತೆ ತೆಗೆದುಕೊಳ್ಳಬೇಕಾದ ಮುನ್ನೆಚರಿಕೆ ಕ್ರಮಗಳ ಕುರಿತು ಸರ್ಕಾರವು ವಿವಿಧ ಹಂತಗಳಲ್ಲಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ತಿಳಿಸಲಾಗಿರುತ್ತದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಗ್ರಾಮದ ನೀರು ಮತ್ತು ನೈರ್ಮಲ್ಯ ಸಮಿತಿ ಹಾಗೂ ಸ್ವ-ಸಹಾಯ ಸಂಘಗಳ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಬರುವ ನೀರಿನ ಮೂಲಗಳ ಗುಣಮಟ್ಟದ ಪರೀಕ್ಷೆಯನ್ನು Field Test Kit (FTK) & Bacteriological vials ಗಳನ್ನು ಉಪಯೋಗಿಸಿ ಕೈಗೊಳ್ಳುವ ಕುರಿತು ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮತ್ತು ಏಕಗ್ರಾಮ ಕುಡಿಯುವ ನೀರಿನ ಯೋಜನೆಗಳಿಂದ ಸರಬರಾಜು ಮಾಡುವ ಕುಡಿಯುವ ನೀರಿನ ಗುಣಮಟ್ಟದ ಪರೀಕ್ಷೆಗಳನ್ನು ಕೈಗೊಳ್ಳುವ ಕುರಿತು ಪ್ರಮಾಣಿತ ಕಾರ್ಯಾಚರಣೆಯ ವಿಧಾನಗಳನ್ನು Standard Operating Procedures (SOP) ಪತ್ರ ಸಂಖ್ಯೆRDWSD/09/WQMSP/2022 ದಿನಾಂಕ:31.10.2022ರಂದು ನೀಡಲಾಗಿರುತ್ತದೆ. ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಮುನ್ನ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ವಿವರವಾದ ಪತ್ರವನ್ನು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ:14.06.2022ರಂದು ಕಳುಹಿಸಲಾಗಿರುತ್ತದೆ.

ಕಲುಷಿತ ನೀರು ಸರಬರಾಜಿನಿಂದ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ವಾಸಿಸುವ ಜನರ ಆರೋಗ್ಯದ ಮೇಲಾಗುತ್ತಿರುವ ದುಷ್ಪರಿಣಾಮಗಳನ್ನು ತಡೆಯುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಮತ್ತು ಇಂತಹ ಪ್ರಕರಣಗಳು ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಜವಾಬ್ದಾರಿಯನ್ನಾಗಿ ಮಾಡಲು ಸನ್ಮಾನ್ಯ ಮುಖ್ಯ ಮಂತ್ರಿಗಳು ದಿನಾಂಕ:12.06.2023ರ ಸಭೆಯ ಆದೇಶದಂತೆ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಿಂದ ದಿನಾಂಕ:15.06.2023ರಂದು ವಿವರವಾದ "ಅರೆ ಸರ್ಕಾರಿ" ಪತ್ರವನ್ನು ಕಳುಹಿಸಲಾಗಿರುತ್ತದೆ.

ಮುಂದುವರೆದು ಇಂತಹ ಪ್ರಕಣಗಳನ್ನು ತಡೆಯುವ ನಿಟ್ಟಿನಲ್ಲಿ ತಾಲ್ಲೂಕುವಾರು ಕಾರ್ಯಪಡೆಗಳನ್ನು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳನ್ನು ಒಳಗೊಂಡಂತೆ ತಂಡವನ್ನು ರಚಿಸಲು ನಿರ್ದೇಶನ ನೀಡಲಾಗಿದ್ದು, ಎಲ್ಲಾ ಕುಡಿಯುವ ನೀರಿನ ಮೂಲಗಳ ಸುತ್ತಲೂ ಯಾವುದೇ ಕೊಳಚೆ ನೀರು ನಿಲ್ಲದಂತೆ ಮತ್ತು ನೀರು ಸರಾಗವಾಗಿ ಹರಿಯುವಂತೆ ಪ್ಲಾಟ್‌ಫಾರಂ ಮತ್ತು ಸುತ್ತಲೂ ಕಟ್ಟೆಯನ್ನು ಕಟ್ಟುವಂತೆ ಕೂಡಲೇ ಕ್ರಮ ಕೈಗೊಳ್ಳಲು ತಿಳಿಸಲಾಗಿದ್ದು, ಈಗಾಗಲೇ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿರುವ Overhead tanks, cistern ಗಳನ್ನು ಸಾಮೂಹಿಕವಾಗಿ ಸ್ವಚ್ಛಗೊಳಿಸುವ ಮತ್ತು ಕ್ಲೋರಿನೇಷನ್ ಅನ್ನು ಕೈಗೊಳ್ಳುವ ಸಪ್ತಾಹಗಳನ್ನು ಕೆಲವು ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗಿದ್ದು, ಉಳಿದ ಜಿಲ್ಲೆಗಳಲ್ಲೂ ಸಹ ಸಪ್ತಾಹಗಳನ್ನು ಹಮ್ಮಿಕೊಳ್ಳುವಂತೆ ಹಾಗೂ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿರುತ್ತದೆ.

ಸಂ:ಗ್ರಾಕುನೀ&ನೈ/27/ಅಧೀಕ್ಷಕರು-01/2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಸಚಿವರು